# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 144 |
| ಉತ್ತರಿಸಬೇಕಾದ ದಿನಾಂಕ | 28.1.2026 |
| ವಿಧಾನ ಪರಿಷತ್ತು ಸದಸ್ಯರ ಹೆಸರು | ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿರುವ ಸ್ಲಂಗಳು ಹೊಲಸಿನಿಂದ ತುಂಬಿದ್ದು, ಜನರು ವಾಸಿಸಲು ಯೋಗ್ಯವಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ; | ಹೌದು |
| (ಆ) | ಮುರುಕಲು ಹಾಗೂ ಗುಡಿಸಲು ಮನೆಗಳು, ಕೊಳಚೆ ನೀರು, ಶೌಚಾಲಯಗಳು/ ಸ್ನಾನಗೃಹಗಳ ಕೊರತೆಗಳಿಂದ ಸ್ಲಂಗಳಲ್ಲಿ ವಾಸಿಸುತ್ತಿರುವ ಜನರು ರೋಗ-ರುಜಿನಗಳಿಗೆ ಬಲಿಯಾಗಿ ನರಕದ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವುಗಳ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ಕೊಳಗೇರಿ ಗುಣಲಕ್ಷಣಗಳನ್ನು ಹೊಂದಿರುವ ಕೊಳಚೆ ಪ್ರದೇಶಗಳನ್ನು ಗುರುತಿಸಿ, ಮಂಡಳಿಯ ಕಾಯ್ದೆಯಡಿ ಘೋಷಣೆ ಹೊರಡಿಸಿ, ಕೊಳಗೇರಿ ಸುಧಾರಣೆ ಯೋಜನೆಯಡಿ ಸರ್ಕಾರವು ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ರಾಜ್ಯಾದ್ಯಂತ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಸಮುದಾಯ ಭವನ ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ತಯಾರಿಸಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗಿರುತ್ತದೆ.<br><br>ಕೇಂದ್ರ ಪುರಸ್ಕೃತ JnNURM-BSUP/IHSDP ವಸತಿ ಕಾರ್ಯಕ್ರಮದಡಿಯಲ್ಲಿ ಮಂಜೂರಾದ ಯೋಜನೆಯಡಿ IEC ಕಾರ್ಯಕ್ರಮಕ್ಕೆ ಅನುದಾನವನ್ನು ಮೀಸಲಿಟಿದ್ದು, ಅದರನ್ವಯ ಕೊಳಗೇರಿ ನಿವಾಸಿಗಳ ಜೀವನ ಮಟ್ಟವನ್ನು ಸುಧಾರಿಸಲು ಕೌಶಲ್ಯ ಬಲವರ್ಧನೆಗೆ ತರಬೇತಿ, ಆದಾಯ ವೃದ್ಧಿ ತರಬೇತಿ ಕಾರ್ಯಕ್ರಮಗಳು ಹಾಗೂ ನಿರುದ್ಯೋಗಿ ವಿದ್ಯಾವಂತ ಯುವಕ ಯುವತಿಯರಿಗೆ ಕಂಪ್ಯೂಟರ್ ತರಬೇತಿ ಹಾಗೂ ಕೊಳಗೇರಿ ನಿವಾಸಿಗಳ ಆರೋಗ್ಯ ಮತ್ತು ಶುಚಿತ್ವವನ್ನು ಕಾಪಾಡಲು ಸಾಮಾಜಿಕ ಅರಿವು ಮೂಡಿಸುವ ಕಾರ್ಯಕ್ರಮಗಳು ಹಾಗೂ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಾಗೂ ಉಚಿತವಾಗಿ ಔಷಧ ವಿತರಣೆ ಕಾರ್ಯಕ್ರಮಗಳನ್ನು ಕೊಳಗೇರಿ ಪ್ರದೇಶಗಳಲ್ಲಿ ಎನ್.ಜಿ.ಓ. ಮುಖಾಂತರ ಮಂಡಳಿ ವತಿಯಿಂದ ಹಮ್ಮಿಕೊಳ್ಳಲಾಗಿರುತ್ತದೆ. |
| (ಇ) | ಸುಮಾರು 70 ಲಕ್ಷ ನಿವಾಸಿಗಳು ಮೂಲಭೂತ ಸೌಕರ್ಯಗಳಿಲ್ಲದೆ ನಾಗರೀಕ ಸಮಾಜ ನಾಚಿಕೆ ಪಡುವಂತಹ ಜೀವನ ನಡೆಸುತ್ತಿದ್ದು, ಅವರಿಗೆ ಸುಸಜ್ಜಿತ ನಿವೇಶನಗಳನ್ನು, ಒದಗಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ; | ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳ ಸಾಮಾಜಿಕ ಸಮೀಕ್ಷೆಯನ್ನು ಕಚ್ಚಾ-ಸೆಮಿಪಕ್ಕಾಮನೆಗಳಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಬೇಡಿಕೆಯನುಸಾರ ಮನೆಗಳ ನಿರ್ಮಾಣಕ್ಕೆ ಯೋಜನಾ ವರದಿಯನ್ನು ತಯಾರಿಸಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ನಿಯಮಾನುಸಾರ ಮನೆಗಳನ್ನು ನಿರ್ಮಿಸಿ, ಹಂಚಿಕೆ ಕ್ರಮ ವಹಿಸಲಾಗುತ್ತಿದೆ. ನಿವೇಶನ ನೀಡುವ ಕ್ರಮ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಒಳಪಡುವುದಿಲ್ಲ. |

| | | |
|---|---|---|
| ಈ) | ಮೂಢ ನಂಬಿಕೆ, ದುಶ್ಚಟಗಳು, ರೋಗ ರುಜಿನಗಳು, ಹೆಣ್ಣು ಮಕ್ಕಳ ಶೋಷಣೆ, ಪೌಷ್ಠಿಕ ಆಹಾರದ ಕೊರತೆ ಮುಂತಾದ ಸಾಮಾಜಿಕ-ಆರ್ಥಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆಯೇ: ಅವು ಯಾವುವು? | ಕೇಂದ್ರ ಪುರಸ್ಕೃತ JnNURM BSUP/IHSDP ವಸತಿ ಕಾರ್ಯಕ್ರಮದಡಿಯಲ್ಲಿ ಮಂಜೂರಾದ ಯೋಜನೆಯಡಿ IEC ಕಾರ್ಯಕ್ರಮಕ್ಕೆ ಅನುದಾನವನ್ನು ಮೀಸಲಿಟಿದ್ದು, ಅದರನ್ವಯ ಕೊಳಗೇರಿ ನಿವಾಸಿಗಳ ಜೀವನ ಮಟ್ಟವನ್ನು ಸುಧಾರಿಸಲು ಕೌಶಲ್ಯ ಬಲವರ್ಧನೆಗೆ ತರಬೇತಿ, ಆದಾಯ ವೃದ್ಧಿ ತರಬೇತಿ ಕಾರ್ಯಕ್ರಮಗಳು ಹಾಗೂ ನಿರುದ್ಯೋಗಿ ವಿದ್ಯಾವಂತ ಯುವಕ ಯುವತಿಯರಿಗೆ ಕಂಪ್ಯೂಟರ್ ತರಬೇತಿ ಹಾಗೂ ಕೊಳಗೇರಿ ನಿವಾಸಿಗಳ ಆರೋಗ್ಯ ಮತ್ತು ಶುಚಿತ್ವವನ್ನು ಕಾಪಾಡಲು ಸಾಮಾಜಿಕ ಅರಿವು ಮೂಡಿಸುವ ಕಾರ್ಯಕ್ರಮಗಳು ಹಾಗೂ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಾಗೂ ಉಚಿತವಾಗಿ ಔಷಧ ವಿತರಣೆ ಕಾರ್ಯಕ್ರಮಗಳನ್ನು ಕೊಳಗೇರಿ ಪ್ರದೇಶಗಳಲ್ಲಿ ಎನ್.ಜಿ.ಓ. ಮುಖಾಂತರ ಮಂಡಳಿ ವತಿಯಿಂದ ಹಮ್ಮಿಕೊಳ್ಳಲಾಗಿರುತ್ತದೆ.<br><br>ಪ್ರಸ್ತುತ ಮಂಡಳಿಯ 2025-26ನೇ ಸಾಲಿನ ಕ್ರಿಯಾ ಯೋಜನೆಯಡಿ ಕೊಳಚೆ ಸುಧಾರಣೆ ಯೋಜನೆಯಡಿ IEC ಕಾರ್ಯಕ್ರಮಕ್ಕೆ ರೂ. 1.00 ಕೋಟಿಗಳನ್ನು ಒದಗಿಸಲಾಗಿದ್ದು, ತುಮಕೂರು ನಗರದ ಎನ್. ಆರ್. ಕಾಲೋನಿ ಕೊಳಗೇರಿ ಪ್ರದೇಶದಲ್ಲಿ 100 ಫಲಾನುಭವಿಗಳಿಗೆ ಟೈಲರಿಂಗ್ ತರಬೇತಿ, ಬೆಂಗಳೂರು ನಗರದ ಬಸವನಗುಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಮಂಜುನಾಥ್ ನಗರ ಮತ್ತು ಚಾಮುಂಡಿನಗರ ಕೊಳಗೇರಿ ಪ್ರದೇಶದ ನಿವಾಸಿಗಳಿಗೆ ಆರೋಗ್ಯ ತಪಾಸಣೆ ಶಿಬಿರ ಮತ್ತು ಕೌಶಲ್ಯ ಅಭಿವೃದ್ಧಿ ತರಬೇತಿ ಶಿಬಿರಗಳನ್ನು ಏರ್ಪಡಿಸಲು ಉದ್ದೇಶಿಸಲಾಗಿದೆ. |

ಸಂಖ್ಯೆ: ವಇ 5 ಎಸ್‌ಬಿಎಂ 2026

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು